ಇ) ಯಾವಾಗ ರಸ್ತೆಯನ್ನು ಅಭಿವೃದ್ದಿಪಡಿಸಲು ಪ್ರಾರಂಭಿಸಲಾಗುವುದು;

ಈ) ಅಭಿವೃದ್ದಿ ಕೆಲಸಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು;

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಹೌದು ಬಂದಿರುತ್ತದೆ.

ಆ) ಸದರಿ ರಸ್ತೆ ಕಿಮೀ 0.0 ರಿಂದ 32.12 ಕಿ.ಮೀ ವರೆಗಿನ ಮೇಲೆ ಗುಂಡಿಗಳನ್ನು ತುಂಬಿ ನಿರ್ವಹಣೆ ಮಾಡಲು ರೂ. 10.00 ಲಕ್ಷಗಳ ಅನುದಾನ ನೀಡಲಾಗಿದೆ. ಗುತ್ತಿಗೆ ಕರೆಯಲಾಗಿದ್ದು ಮಾರ್ಚ್ ಅಂತ್ಯದೊಳಗಾಗಿ ಗುಂಡಿ ಕೆಲಸವನ್ನು ಪೂರ್ಣಗೊಳಿಸಲಾಗುವುದು.

ಇ) ಆರ್ಥಿಕ ವರ್ಷ 2005–08 ರವರೆಗೆ 3 ವರ್ಷದ ನಿರ್ವಹಣೆ ಅಡಿಯಲ್ಲಿ ರೂ. 100.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೆ.ಆರ್.ಡಿ.ಸಿ.ಎಲ್. ನಿಂದ ನಿರ್ವಹಣೆ ಮಾಡಲು ಯೋಜಿಸಲಾಗಿದೆ.

ಈ) 3 ವರ್ಷಗಳ ಅವಧಿಯಲ್ಲಿ ಸದರಿ ರಸ್ತೆಯನ್ನು ನಿರ್ವಹಣೆ ಮಾಡುವ ಯೋಜನೆಯ ವೆಚ್ಚ ರೂ. 100.00 ಲಕ್ಷ ರೂ.ಗಳು.

847(1457): ಶ್ರೀ ಶಿವಾನಂದ ಪಾಟೀಲ್ (ಬಸವನ ಬಾಗೇವಾಡಿ):

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವನ ಬಾಗೇವಾಡಿ ಪಟ್ಟಣ ಮತ್ತು ಇಂಗಳೇಶ್ವರ ಗ್ರಾಮಗಳನ್ನು ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದಡಿ ಸೇರಿಸಲಾಗಿದೆಯೇ?

ಆ) ಪ್ರಾಧಿಕಾರದಿಂದ ಬಸವನ ಬಾಗೇವಾಡಿ ಹಾಗೂ ಇಂಗಳೇಶ್ವರ ಗ್ರಾಮಗಳಲ್ಲಿ ಯಾವ ಯಾವ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗಿದೆ ಮತ್ತು ಯಾವ ಅಭಿವೃದ್ಧಿ ಕೆಲಸಗಳನ್ನು ಸೇರಿಸಿಕೊಳ್ಳಲಾಗುವುದು?

ಇ) ಪ್ರಾಧಿಕಾರದಿಂದ ಇವುಗಳಿಗೆ ಒದಗಿಸಲಾಗಿರುವ ಅನುದಾನ ಎಷ್ಟು?

ಈ) ಯಾವ ನಿರ್ದಿಷ್ಟ ಕಾಲಮಿತಿ ಹಾಕಿಕೊಂಡು ಪ್ರಾಧಿಕಾರ ಅಭಿವೃದ್ಧಿ ಗೊಳಿಸಲಾಗುವುದು?

ಶ್ರೀ ಎಂ. ಪಿ. ಪ್ರಕಾಶ್ (ಕಂದಾಯ ಸಚಿವರು) :

ಅ) ಬಸವನಬಾಗೇವಾಡಿ ಪಟ್ಟಣ ಮತ್ತು ಇಂಗಳೇಶ್ವರ ಗ್ರಾಮವನ್ನು ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಸೇರಿಸಿರುವುದಿಲ್ಲ. ಆದರೆ ಸರ್ಕಾರಿ ಅಧಿಸೂಚನೆ ಸಂಖ್ಯೆ ಆರ್‌ಡಿ:67:ಆರ್‌ಇಹೆಚ್:2002 ದಿ:9–3–04 ರನ್ವಯ ಬಸವನ ಬಾಗೇವಾಡಿ ಪಟ್ಟಣದಲ್ಲಿರುವ ಶ್ರೀ ಬಸವೇಶ್ವರ ದೇವಾಲಯದ ಸಂಕೀರ್ಣ ಹಾಗೂ ಬಸವ ಸಾಂಸ್ಕೃತಿಕ ಕೇಂದ್ರ ಕಟ್ಟಡ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡು ಜಾಗವನ್ನು ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ಹೆಚ್ಚುವರಿ ಕ್ಷೇತ್ರ ಎಂದು ಸೇರಿಸಲಾಗಿದ್ದು ಇಂಗಳೇಶ್ವರ ಗ್ರಾಮ ಯಾವುದೇ ಪ್ರದೇಶವನ್ನು ಸೇರಿಸಿರುವುದಿಲ್ಲ.

ಆ) ಬಸವನ ಬಾಗೇವಾಡಿ ಪಟ್ಟಣದಲ್ಲಿ ಕೆಳಕಂಡ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗಿದೆ.

1) ಬಸವ ಸಾಂಸ್ಕೃತಿಕ ಕೇಂದ್ರದ ಕಟ್ಟಡ ನಿರ್ಮಾಣ.

2) ಬಸವೇಶ್ವರ ದೇವಸ್ಥಾನದ ಸಂಕೀರ್ಣದಲ್ಲಿ 63 ಅಂಗಡಿ ಮಳಿಗೆಗಳ ಮತ್ತು ಉಪಹಾರ ಗೃಹಗಳ ನಿರ್ಮಾಣ.

3) ದೇವಸ್ಥಾನದ ಪಕ್ಕದಲ್ಲಿ ಅಂದಾಜು 2.00 ಎಕರೆ ಪ್ರದೇಶದಲ್ಲಿ ಉದ್ಯಾನವನ ನಿರ್ಮಿಸುವ ಕಾಮಗಾರಿ.

ನವ ಸಾಂಸ್ಕೃತಿಕ ಕೇಂದ್ರದಿಂದ ಬಿಜಾಪುರ ಮುದ್ದೇಬಿಹಾಳ ಮುಖ್ಯ ರಸ್ತೆಯವರೆಗೆ ಒಂದು ಸಂಪರ್ಕ ರಸ್ತೆ ನಿರ್ಮಾಣ ಇದರಲ್ಲಿ 51 ಮನೆಗಳ ಹಾಗೂ ಖಾಲಿ ನಿವೇಶನಗಳ ಭೂಸ್ವಾಧೀನ ಹಿಂದೆ ನಿರ್ವಹಿತರಾಗುವ ಮನೆಗಳ ಮಾಲೀಕರಿಗೆ ನಿವೇಶನಗಳನ್ನು ಒದಗಿಸುವುದು ಮತ್ತು ಸಂಪರ್ಕ ರಸ್ತೆ ಕಲ್ಪಿಸಿಕೊಡುವುದು.

ಇ) ಈ ಮೇಲಿನ ಕಾಮಗಾರಿಗಳಿಗಾಗಿ ಅಂದಾಜು ರೂ. 3.00 ಕೋಟಿ ವೆಚ್ಚ ತಗಲುವುದು, ಇದುವರೆಗೆ ಬಿಡುಗಡೆಯಾದ ಅನುದಾನದ ವಿವರಗಳು ಕೆಳಕಂಡಂತಿವೆ.

| | | |
|---|---|---|
| 1) | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ | ರೂ. 18.00 ಲಕ್ಷ |
| 2) | ಲೋಕಸಭಾ ಸದಸ್ಯರ ವಂತಿಗೆ | ರೂ. 25.00 ಲಕ್ಷ |
| | | **ರೂ. 43.00 ಲಕ್ಷ** |

ಇನ್ನುಳಿದ ಹಣವನ್ನು ಮುಂಬರುವ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾನ್ಯ ಶಾಸಕರ ನಿಧಿಯಿಂದ ಮಾನ್ಯ ಸಂಸದರ ನಿಧಿಯಿಂದ ಹಾಗೂ ಸಾರ್ವಜನಿಕರಿಂದ ವಂತಿಗೆಯ ರೂಪದಲ್ಲಿ ಪಡೆಯಲಾಗುವುದು.

ಈ) ಮೇಲಿನ ಕಾಮಗಾರಿಗಳನ್ನು ಈಗಾಗಲೇ ಕೈಗೆತ್ತಿಕೊಳ್ಳಲಾಗಿದ್ದು ಕೆಲಸ ಪ್ರಗತಿಯಲ್ಲಿದೆ. ಬಸವ ಸಾಂಸ್ಕೃತಿಕ ಕೇಂದ್ರ ಮತ್ತು ಕಟ್ಟಡದ ನೆಲ ಅಂತಸ್ತು ಪೂರ್ತಿಗೊಂಡಿದೆ. ಉಳಿದ ಕೆಲಸ ಪ್ರಗತಿಯಲ್ಲಿದೆ. ಶ್ರೀ ಬಸವೇಶ್ವರ ದೇವಾಲಯದ ಪಕ್ಕದಲ್ಲಿ ಉದ್ಯಾನವನ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ ಸಂಪನ್ಮೂಲಗಳು ಸಂಗ್ರಹಣೆಯನ್ನಾಧರಿಸಿ ಕಾಮಗಾರಿಗಳಲ್ಲಿ ಪ್ರಗತಿ ಸಾಧಿಸಲಾಗುವುದು. ಇದಕ್ಕೆ ನಿರ್ದಿಷ್ಟ ಕಾಲಮಿತಿ ಇರುವುದಿಲ್ಲ.

848(1458) ಶ್ರೀ ಶಿವಾನಂದ ಪಾಟೀಲ್ (ಬಸವನ ಬಾಗೇವಾಡಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದ'ಂಯವಿಟ್ಟು ಉತ್ತರಿಸುವರೇ?

ಅ) ಮಂಗಳೂರು–ಸೋಲಾಪುರ ರಸ್ತೆಯನ್ನು ರಷ್ಟ್ರೀಯ ಹೆದ್ದಾರಿ–13 ರನ್ನಾಗಿ ಎಂದು ಮಾರ್ಪಡಿಸಲಾಗಿದೆ;

ಆ) ಮೆಲ್ದರ್ಜೆಗೇರಿಸಿದ ಸಮಯದಿಂದ ಇಲ್ಲಿಯವರೆಗೆ ಎಷ್ಟು ಬಾರಿ ರಸ್ತೆಯನ್ನು ದುರಸ್ತಿಗೊಳಿಸಲಾಗಿದೆ;

ಇ) ಈ ರಾಷ್ಟ್ರೀಯ ಹೆದ್ದಾರಿಯ ಭಾಗವಾದ ಚಿತ್ರದುರ್ಗ ಬಿಜಾಪುರ ರಸ್ತೆಯು ಯಾವ ಸ್ಥಿತಿಯಲ್ಲಿದೆ;

ಈ) ಚಿತ್ರದುರ್ಗ ಬಿಜಾಪುರ ರಸ್ತೆಯ ಮೇಲೆ ಹೊಂಡಗಳು ಬಿದ್ದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಾದರೆ, ಇದನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಮಂಗಳೂರು–ಸೋಲಾಪುರ ರಸ್ತೆಯನ್ನು ಎರಡು ಹಂತದಲ್ಲಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮಾರ್ಪಡಿಸಲಾಗಿದ್ದು ಅವುಗಳ ವಿವರ ಕೆಳಕಂಡಂತಿದೆ.

1) ಸೊಲ್ಲಾಪುರ–ಚಿತ್ರದುರ್ಗ ರಸ್ತೆಯನ್ನು 1960ರಲ್ಲಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಘೋಷಿಸಲಾಗಿದೆ.